**All India Radio: Bangalore**
**National Bulletins In Kannada**
**28.05.2025 / 13.10 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**28.05.2025 / 13.10 hrs**

**<><*<><>*><>**

ಮುಖ್ಯಾಂಶಗಳು

೧. ಪ್ರಧಾನಿ ನರೇಂದ್ರ ಮೋದಿ ನಾಳೆಯಿಂದ ನಾಲ್ಕು ರಾಜ್ಯಗಳ ಪ್ರವಾಸ; ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ

೨. ಕೃಷಿ ವಲಯದ ಅಭಿವೃದ್ಧಿಗಾಗಿ ನಾಳೆಯಿಂದ ದೇಶಾದ್ಯಂತ ವಿಕಸಿತ ಕೃಷಿ ಸಂಕಲ್ಪ ಅಭಿಯಾನ

೩. ಭಯೋತ್ಪಾದನೆ ವಿರುದ್ಧ ಭಾರತದ ಹೋರಾಟ; ಸರ್ವಪಕ್ಷ ನಿಯೋಗಗಳಿಂದ ಜಾಗತಿಕ ನಾಯಕರಿಗೆ ಮನವರಿಕೆ ಪ್ರಕ್ರಿಯೆ ಮುಂದುವರಿಕೆ

೪. ೨೦೨೪-೨೫ ನೇ ಆರ್ಥಿಕ ವರ್ಷದಲ್ಲಿ ಭಾರತಕ್ಕೆ ಹರಿದುಬಂದ ೮೧ ಶತಕೋಟಿಗೂ ಅಧಿಕ ಮೊತ್ತದ ಅಮೆರಿಕನ್ ಡಾಲರ್ ವಿದೇಶಿ ನೇರ ಬಂಡವಾಳ

*************

ಪ್ರಧಾನಮಂತ್ರಿ ನರೇಂದ್ರ ಮೋದಿ ನಾಳೆಯಿಂದ ಎರಡು ದಿನಗಳ ಕಾಲ ಸಿಕ್ಕಿಂ, ಪಶ್ಚಿಮ ಬಂಗಾಳ, ಬಿಹಾರ ಮತ್ತು ಉತ್ತರಪ್ರದೇಶಗಳಲ್ಲಿ ಪ್ರವಾಸ ಮಾಡಲಿದ್ದಾರೆ. ಸಿಕ್ಕಿಂ ಭೇಟಿ ವೇಳೆ ಪ್ರಧಾನಿ ನರೇಂದ್ರ ಮೋದಿ ಅವರು, ಸಿಕ್ಕಿಂ ರಾಜ್ಯದ ಸುವರ್ಣ ಮಹೋತ್ಸವ ಸಮಾರಂಭದಲ್ಲಿ ಭಾಗಿಯಾಗಲಿದ್ದಾರೆ. ಇದೇ ಸಂದರ್ಭದಲ್ಲಿ ಅವರು, ವಿವಿಧ ಯೋಜನೆಗಳಿಗೆ ಶಂಕುಸ್ಥಾಪನೆ ಮತ್ತು ಉದ್ಘಾಟನೆ ನೆರವೇರಿಸಲಿದ್ದಾರೆ. ಈ ಸಂದರ್ಭದಲ್ಲಿ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಭಾಷಣ ಮಾಡಲಿದ್ದಾರೆ. ಬಳಿಕ ಪಶ್ಚಿಮ ಬಂಗಾಳಕ್ಕೆ ತೆರಳಲಿರುವ ಅವರು, ಅಲಿಪುರ್ದ್ವಾರ್ ಅನಿಲ ವಿತರಾಣಾ ಯೋಜನೆಗೆ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಇದಾದ ನಂತರ ಬಿಹಾರಗೆ ತರಳಲಿರುವ ಅವರು, ಪಾಟ್ನಾ ವಿಮಾನ ನಿಲ್ದಾಣದಲ್ಲಿ ನಿರ್ಮಿಸಿರುವ ಹೊಸ ಟರ್ಮಿನಲ್ ಉದ್ಘಾಟನೆ ಮಾಡಲಿದ್ದಾರೆ. ಮರುದಿನ ಬಿಹಾರದ ಕಾರಾಕಟ್‌ನಲ್ಲಿ ಸುಮಾರು ೪೮ ಸಾವಿರದ ೫೨೦ ಕೋಟಿ ರೂಪಾಯಿ ವೆಚ್ಚದ ಅಭಿವೃದ್ಧಿ ಯೋಜನೆಗಳಿಗೆ ಶಂಕುಸ್ಥಾಪನೆ ಮತ್ತು ಉದ್ಘಾಟನೆ ನೆರವೇರಿಸಲಿದ್ದಾರೆ. ಆ ನಂತರ ಅವರು ಉತ್ತರಪ್ರದೇಶಕ್ಕೆ ಭೇಟಿ ನೀಡಲಿದ್ದು, ಕಾನ್‌ಪುರ ನಗರದಲ್ಲಿ ಸುಮಾರು ೨೦ ಸಾವಿರದ ೯೦೦ ಕೋಟಿ ರೂಪಾಯಿ ವೆಚ್ಚದ ಬಹು ಅಭಿವೃದ್ಧಿ ಯೋಜನೆಗಳಿಗೆ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇರಿಸಿ, ಸಾರ್ವಜನಿಕ ಸಭೆಯನ್ನುದ್ದೇಶಿಸಿ ಭಾಷಣ ಮಾಡಲಿದ್ದಾರೆ.

*************

ಮಹತ್ವಾಕಾಂಕ್ಷೆಯಿಂದ ನಾಳೆಯಿಂದ ದೇಶಾದ್ಯಂತ 'ವಿಕಸಿತ ಕೃಷಿ ಸಂಕಲ್ಪ' ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ. ಒಡಿಶಾದ ಪುರಿಯಲ್ಲಿ ಕೇಂದ್ರ ಕೃಷಿ ಮತ್ತು ರೈತರ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅಭಿಯಾನಕ್ಕೆ ಚಾಲನೆ ನೀಡಲಿದ್ದಾರೆ. ದೇಶದ ೭೦೦ ಕ್ಕೂ ಹೆಚ್ಚು ಜಿಲ್ಲೆಗಳಲ್ಲಿ ಈ ಅಭಿಯಾನ ನಡೆಯಲಿದ್ದು, ಜೂನ್ ೧೨ರವರೆಗೆ ಮುಂದುವರಿಯಲಿದೆ. ಅಭಿಯಾನದ ಸಂದರ್ಭದಲ್ಲಿ ಕೇಂದ್ರ ಸಚಿವರು, ಸುಮಾರು ೨೦ ರಾಜ್ಯಗಳಿಗೆ ಭೇಟಿ ನೀಡಲಿದ್ದು, ರೈತರು, ವಿಜ್ಞಾನಿಗಳೊಂದಿಗೆ ನೇರ ಸಂವಾದದಲ್ಲಿ ತೊಡಗುವಂತೆ ಪ್ರೇರೇಪಿಸಲಿದ್ದಾರೆ ಎಂದು ಕೃಷಿ ಮತ್ತು ರೈತರ ಕಲ್ಯಾಣ ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ. ಕರ್ನಾಟಕ ಸೇರಿದಂತೆ ತಮಿಳುನಾಡು, ತೆಲಂಗಾಣ, ಆಂಧ್ರಪ್ರದೇಶ, ಜಮ್ಮು, ರಾಜಸ್ಥಾನ, ಗುಜರಾತ್, ಉತ್ತರ ಪ್ರದೇಶ, ಬಿಹಾರ, ಮಹಾರಾಷ್ಟ್ರ, ಹರಿಯಾಣ, ಪಂಜಾಬ್, ಉತ್ತರಾಖಂಡ್, ಅಸ್ಸಾಂ, ಮೇಘಾಲಯ, ಮಧ್ಯಪ್ರದೇಶ, ದೆಹಲಿ ಮತ್ತು ಛತ್ತೀಸ್ ಗಢ ರಾಜ್ಯಗಳಲ್ಲಿ ಸಚಿವರು ಪ್ರವಾಸ ಕೈಗೊಳ್ಳಲಿದ್ದಾರೆ. ವಿವಿಧ ಪ್ರದೇಶಗಳಿಗೆ ನಿರ್ದಿಷ್ಟವಾದ ಪ್ರಮುಖ ಮುಂಗಾರು ಬೆಳೆಗಳಿಗೆ ಆಧುನಿಕ ತಂತ್ರಜ್ಞಾನಗಳ ಬಗ್ಗೆ ರೈತರಿರಲ್ಲಿ ಅರಿವು ಮೂಡಿಸುವುದರ ಜೊತೆಗೆ ಕೇಂದ್ರ ಸರ್ಕಾರಿ ಯೋಜನೆಗಳು ಮತ್ತು ನೀತಿಗಳ ಬಗ್ಗೆ ಜಾಗೃತಿ ಮೂಡಿಸುವುದು ಈ ಅಭಿಯಾನದ ಮುಖ್ಯ ಉದ್ದೇಶಗಳಾಗಿವೆ.

*************

ಭಯೋತ್ಪಾದನೆಯ ವಿರುದ್ಧ ಶೂನ್ಯ ಸಹಿಷ್ಣುತೆಯ ಭಾರತದ ಸಂದೇಶ ವಿಶ್ವಾದ್ಯಂತ ಪ್ರತಿಧ್ವನಿಸುತ್ತಿದೆ, ಭಾರತದ ಬಹುಪಕ್ಷೀಯ ನಿಯೋಗಗಳು ಪಾಕಿಸ್ತಾನದ ಗಡಿಯಾಚೆಗಿನ ಭಯೋತ್ಪಾದನೆಯನ್ನು ಮತ್ತಷ್ಟು ಬಹಿರಂಗಪಡಿಸಲು ವಿವಿಧ ದೇಶಗಳಲ್ಲಿನ ವಿಶ್ವ ನಾಯಕರು, ಸಂಸದರು, ಚಿಂತಕರ ಚಾವಡಿಗಳು, ಮಾಧ್ಯಮ ಮತ್ತು ನಾಗರಿಕ ಸಮಾಜದೊಂದಿಗೆ ಸತತವಾಗಿ ಸಂವಹನ ನಡೆಸುತ್ತಿವೆ. ಶಿವಸೇನೆಯ ಸಂಸದ ಶ್ರೀಕಾಂತ್ ಶಿಂಧೆ ನೇತೃತ್ವದ ಸರ್ವಪಕ್ಷಗಳ ನಿಯೋಗ, ಕಾಂಗೋದ ನ್ಯಾಷನಲ್ ಅಸೆಬ್ಲಿಯ ವಿದೇಶಾಂಗ ವ್ಯವಹಾರಗಳ ಸಮಿತಿಯ ಅಧ್ಯಕ್ಷ ಫ್ರೋಫೆಸರ್ ಬೆರ್ತ್ ಹೋಲ್ಡ್ ಉಲುಂಗು ಅವರೊಂದಿಗೆ ನಿನ್ನೆ ಮಹತ್ವದ ಮಾತುಕತೆ ನಡೆಸಿತು. ಎನ್‌ಸಿಪಿ ಸಂಸದೆ ಸುಪ್ರಿಯಾ ಸುಳೆ ನೇತೃತ್ವದ ಮತ್ತೊಂದು ನಿಯೋಗ ನಿನ್ನೆ ದಕ್ಷಿಣಾ ಆಫ್ರಿಕಾಕ್ಕೆ ಭೇಟಿ ನೀಡಿದೆ. ಅಲ್ಲಿನ ಭಾರತದ ಹೈಕಮಿಷನರ್ ಪ್ರಭಾತ್ ಕುಮಾರ್ ನಿಯೋಗವನ್ನು ಆತ್ಮೀಯವಾಗಿ ಬರಮಾಡಿಕೊಂಡರು.

ಧ್ವನಿ: ಸಂಸದೆ ಸುಪ್ರಿಯಾ ಸುಳೆ ( ೧೯ ಸೆಕೆಂಡ್ಸ್)

ಕಾಂಗ್ರೆಸ್ ಸಂಸದ ಶಶಿ ತರೂರ್ ನೇತೃತ್ವದ ಸರ್ವಪಕ್ಷ ನಿಯೋಗ, ನಿನ್ನೆ ಪನಾಮ ಅಸೆಂಬ್ಲಿಯ ಅಧ್ಯಕ್ಷ ದಾನ ಕಾಶ್ಟಾ ನೆಡ ಅವರನ್ನು ಭೇಟಿ ಮಾಡಿ ಭಯೋತ್ಪಾದನೆ ವಿರುದ್ಧ ಭಾರತದ ನಿಲುವನ್ನು ಸ್ಪಷ್ಟಪಡಿಸಿದರು. ಯಾವುದೇ ದೇಶದ ಮೇಲೆ ಯುದ್ಧ ಮಾಡುವ ಆಸಕ್ತಿ ಭಾರತಕ್ಕಿಲ್ಲ. ಆದರೆ, ಭಯೋತ್ಪಾದಕ ಚಟುವಟಿಕೆಗಳನ್ನ ಮಟ್ಟ ಹಾಕುವುದು ಭಾರತದ ಉದ್ದೇಶವಾಗಿದೆ ಎಂದು ತಿಳಿಸಿದರು.

*************

ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ಪಾಕಿಸ್ತಾನ, ಭಯೋತ್ಪಾದಕರ ವಿರುದ್ಧ ಯಾವುದೇ ಕ್ರಮ ಕೈಗೊಳ್ಳದ ಹಿನ್ನೆಲೆಯಲ್ಲಿ ಭಾರತ, ಭಯೋತ್ಪಾದಕರ ನೆಲೆಗಳನ್ನು ಧ್ವಂಸಮಾಡಿದೆ ಎಂದು ಸ್ಪಷ್ಟಪಡಿಸಿದರು.

ಧ್ವನಿ: ಶಶಿ ತರೂರ್ ( ೩೨ ಸೆಕೆಂಡ್ಸ್ )

*************

ಭಾರತದ ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ಇಂದು ಅಮೆರಿಕದ ಅಧೀನ ಕಾರ್ಯದರ್ಶಿ ಜೆಫ್ರಿ ಕೆಸ್ಲರ್ ಅವರನ್ನು ಭೇಟಿ ಮಾಡಿ ನಿರ್ಣಾಯಕ ಮತ್ತು ಉದಯೋನ್ಮುಖ ತಂತ್ರಜ್ಞಾನಗಳಲ್ಲಿ ಸಹಕಾರ ಹೆಚ್ಚಿಸುವ ಬಗ್ಗೆ ಚರ್ಚಿಸಿದ್ದಾರೆ.

*************

೨೦೨೪-೨೫ ನೇ ಆರ್ಥಿಕ ವರ್ಷದಲ್ಲಿ ಭಾರತಕ್ಕೆ ೮೧.೦೪ ಶತಕೋಟಿ ಅಮೆರಿಕನ್ ಡಾಲರ್‌ನಷ್ಟು ಮೌಲ್ಯದ ವಿದೇಶಿ ನೇರ ಬಂಡವಾಳ ಹರಿದುಬಂದಿದೆ. ೨೦೨೩-೨೪ನೇ ಆರ್ಥಿಕ ವರ್ಷಕ್ಕೆ ಹೋಲಿಸಿದರೆ, ವಿದೇಶಿ ನೇರಬಂಡವಾಳ ಹೂಡಿಕೆ ಪ್ರಮಾಣದಲ್ಲಿ ಶೇಕಡ ೧೪ ರಷ್ಟು ಏರಿಕೆ ಕಂಡುಬಂದಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯದ ಹೇಳಿಕೆಯಲ್ಲಿ ತಿಳಿಸಲಾಗಿದೆ. ೨೦೨೪-೨೫ನೇ ಸಾಲಿನಲ್ಲಿ ಸೇವಾ ವಲಯಕ್ಕೆ ಅತ್ಯಂತ ಹೆಚ್ಚಿನ ವಿದೇಶಿ ನೇರ ಬಂಡವಾಳ ಹರಿದು ಬಂದಿದ್ದು, ಒಟ್ಟಾರೆ ಬಂಡವಾಳದಲ್ಲಿ ಶೇಕಡ ೧೯ ರಷ್ಟು ಈ ವಲಯದಲ್ಲಿ ಹೂಡಿಕೆ ಮಾಡಲಾಗಿದೆ. ನಂತರದ ಸ್ಥಾನದಲ್ಲಿ ಕಂಪ್ಯೂಟರ್ ಸಾಫ್ಟ್‌ವೇರ್ ಮತ್ತು ಹಾರ್ಡ್‌ವೇರ್ ವಲಯಗಳಿದ್ದು, ಈ ವಲಯಗಳಿಗೆ ಶೇಕಡ ೧೬ ರಷ್ಟು ಬಂಡವಾಳ ಹೂಡಿಕೆಯಾಗಿದೆ.

*************

ದಕ್ಷಿಣ ಟೆಕ್ಸಾಸ್‌ನ ಬೊಕಾ ಚಿಕಾ ಬೀಚ್ ಬಳಿಯಲ್ಲಿನ ಉಡಾವಣಾ ನೆಲೆಯಿಂದ 'ಸ್ಪೇಸ್‌ಎಕ್ಸ್' ತನ್ನ ಒಂಬತ್ತನೇ ಪರೀಕ್ಷಾ ಹಾರಾಟದ ಸಮಯದಲ್ಲಿ ಸ್ಟಾರ್ ಶೀಪ್ ವಿಮಾನ ಸ್ಲಾಷ್ ಡೌನ್ ಕಾಲದಲ್ಲಿ ಸ್ಫೋಟಗೊಂಡಿದೆ.  ಇದಕ್ಕೆ ಇಂಧನ ಸೋರಿಕೆಯೇ ಕಾರಣ ಎಂದು ಸ್ಪೇಸ್ ಎಕ್ಸ್‌ನ ಸಂಸ್ಥಾಪಕ ಎಲಾನ್ ಮಸ್ಕ್ ಹೇಳಿದ್ದಾರೆ. ಪರೀಕ್ಷಾ ಹಾರಾಟದ ಸಮಯದಲ್ಲಿ ಈ ರೀತಿಯ ಸಮಸ್ಯೆ ಎದುರಾಗಿರುವುದು ಮೂರನೇ ಬಾರಿಯಾಗಿದೆ. ಈ ಹಿಂದೆ ಜನವರಿ ೭ ಮತ್ತು ಮಾರ್ಚ್ ೮ ರಂದು ನಡೆಸಿದ ಪರೀಕ್ಷಾ ಹಾರಾಟಗಳು ವಿಮಾನದ ನಾಶದೊಂದಿಗೆ ಕೊನೆಗೊಂಡಿತ್ತು.

*************

ಪರಾಗ್ವೆ ಅಧ್ಯಕ್ಷ ಸ್ಯಾಂಟಿಯಾಗೊ ಪೆನಾ ಪಲಾಸಿಯೊಸ್ ಮುಂದಿನ ತಿಂಗಳ ೨ ರಿಂದ ೪ ರವರೆಗೆ ಎರಡು ದಿನದ ಪ್ರವಾಸಕ್ಕಾಗಿ ಭಾರತಕ್ಕೆ ಭೇಟಿ ನೀಡಲಿದ್ದಾರೆ. ಅವರೊಂದಿಗೆ ಸಚಿವರು, ಹಿರಿಯ ಅಧಿಕಾರಿಗಳು ಮತ್ತು ವ್ಯಾಪಾರ ಪ್ರತಿನಿಧಿಗಳು ಸೇರಿದಂತೆ ಉನ್ನತ ಮಟ್ಟದ ನಿಯೋಗ ಆಗಮಿಸಲಿದೆ. ಈ ಭೇಟಿಯ

ಸಮಯದಲ್ಲಿ, ಎರಡೂ ಕಡೆಯವರು ದ್ವಿಪಕ್ಷೀಯ ಸಂಬಂಧಗಳ ಸಮಗ್ರ ಪರಿಶೀಲನೆಯನ್ನು ಕೈಗೊಳ್ಳುವ ನಿರೀಕ್ಷೆಯಿದೆ.

*************

ಸ್ವಾತಂತ್ರ್ಯ ಹೋರಾಟಗಾರರಾದ ವಿನಾಯಕ್ ದಾಮೋದರ್ ಸಾವರ್ಕರ್ ಅವರ ಜಯಂತಿ ಅಂಗವಾಗಿ ಪ್ರಧಾನಿ ನರೇಂದ್ರ ಮೋದಿ ಗೌರವ ನಮನ ಸಲ್ಲಿಸಿದ್ದಾರೆ.ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿರುವ ಪ್ರಧಾನಿ, ಸಾವರ್ಕರ್ ಅವರು ಭಾರತ ಮಾತೆಯ ಸುಪುತ್ರರಾಗಿದ್ದು, ಬ್ರಿಟೀಷರ ಸರ್ಕಾರ ಅವರಿಗೆ ಕೊಟ್ಟಂತಹ ಕಿರುಕುಳದ ನಡುವೆಯೂ ಅವರಲ್ಲಿ ತಾಯಿ ನಾಡಿನ ಬಗೆಗಿನ ದೇಶಭಕ್ತಿ ಅಚಲವಾಗಿತ್ತು ಎಂದು ಸ್ಮರಿಸಿದ್ದಾರೆ.

*************

ಆಂಧ್ರಪ್ರದೇಶದ ಮಾಜಿ ಮುಖ್ಯಮಂತ್ರಿ ಎನ್.ಟಿ.ರಾಮರಾವ್ ಜಯಂತಿ ಪ್ರಯುಕ್ತ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಗೌರವ ನಮನ ಸಲ್ಲಿಸಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿರುವ ಅವರು, ರಾಮ್‌ರಾವ್ ಅವರ ಸಾಮಾಜಿಕ ಸೇವೆ, ಬಡವರು ಹಾಗೂ ಹಿಂದುಳಿದವರ ಏಳಿಗೆಗಾಗಿ ನಡೆಸಿದ ಹೋರಾಟ ಅವಿಸ್ಮರಣೀಯ ಎಂದು ಹೇಳಿದ್ದಾರೆ.

*************

ಕೇಂದ್ರೀಯ ನೇರ ತೆರಿಗೆ ಮಂಡಳಿ - ಸಿಬಿಡಿಟಿ, ಆದಾಯ ತೆರಿಗೆ ರಿಟರ್ನ್ಸ್ ಸಲ್ಲಿಸುವ ಕೊನೆಯ ದಿನಾಂಕವನ್ನು ಜುಲೈ ೩೧ ರಿಂದ ಸೆಪ್ಟೆಂಬರ್ ೧೫ ರವರೆಗೆ ವಿಸ್ತರಿಸಿದೆ.

*************

ಮುಂದಿನ ತಿಂಗಳ ೨೮ ರಿಂದ ಭಾರತ್ - ಭೂತಾನ್ ಮಿಸ್ಟಿಕ್ ಪರ್ವತ ಪ್ರವಾಸಕ್ಕಾಗಿ ಭಾರತೀಯ ರೈಲ್ವೆ, ಭಾರತ್ ಗೌರವ್ ಡೀಲಕ್ಸ್ ಎಸಿ ಟೂರಿಸ್ಟ್ ರೈಲು ಸಂಚಾರವನ್ನು ಆರಂಭಿಸಲು ತೀರ್ಮಾನಿಸಿದೆ.

*********END********